# ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ.
# ನ್ಯಾಯಾಲಯ ಮಾಗಡಿ

## ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 1966 /2023

**ಚಾಸಾ ಃ- 03 / ಪ್ರಾಸಾ ಃ- 02**

| | |
|---|---|
| ಹೆಸರು | ಭೈಲಪ್ಪ |
| ತಂದೆ ಹೆಸರು | ಭೈಲಯ್ಯ |
| ವಯಸ್ಸು | 45 |
| ಉದ್ಯೋಗ | ವ್ಯವಸಾಯ |
| ವಿಳಾಸ | ಅಜ್ಜನಹಳ್ಳಿ , ಮಾಗಡಿ ತಾಲ್ಲೂಕು |

**ದಿನಾಂಕಃ 23-09-2023 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ಸಹಿ ಮಾಡಲು ಹೇಳಿದ್ದರಿಂದ ಸಹಿ ಮಾಡಿರುತ್ತೇನೆ. ಸದರಿ ಸಹಿ ಮಾಡುವ ಸಮಯದಲ್ಲಿ ನಾನು , ಚಾಸಾ-1 ಹಾಗೂ ಪೋಲಿಸರು ಇದದರು.

ಈಗ ಸಾಕ್ಷಿಗೆ ನಿಪಿ-2 ಅನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಮಹಜರನ್ನು ಮಾಡಿರುವ ಸಮಯ ನನಗೆ ಗೊತ್ತಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ದಿನಾಂಕ 17.02.2023 ರಂದು ಪೋಲಿಸರು ಘಟನಾ ಸ್ಥಳಕ್ಕೆ ಬಂದು ನನ್ನ ಹಾಗೂ ಚಾಸಾ1 ಮತ್ತು 4 ರವರ ಸಮಕ್ಷಮ ಸಂಜೆ 4.00 ರಿಂದ 4.30 ಗಂಟೆವರೆಗೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸಾಕ್ಷಿಯು ಮಹಜರ್ ಮಾಡಿಕೊಂಡು ಬಂದಿದ್ದರು ಠಾಣೆಯಲ್ಲಿ ಸಾಕ್ಷಿಯಾಗಿ ಸಹಿ ಮಾಡಲು ಹೇಳಿದ ಕಾರಣ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ನಿಮ್ಮ ಸಮಕ್ಷಮ ಕೃತ್ಯಕ್ಕೆ ಉಪಯೋಗಿಸಿದ ಒಂದು ಹೆಲ್ಮೆಟ್ ಅನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸಾಕ್ಷಿ ಅದು ನನಗೆ ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ, ಆ ಸಮಯದಲ್ಲಿ ಚಾಸಾ-4 ರವರು ನಿಮ್ಮ ಜೊತೆ ಇದದರು ಎಂದರೆ ಸಾಕ್ಷಿ ಅದು ನನಗೆ ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಈಗ ಸಾಕ್ಷಿಗೆ ಒಂದು ಪೋಟೋವನ್ನು ತೋರಿಸಲಾಗಿ, ಪೋಲಿಸರು ಮಹಜರ್ ಗಾಗಿ ಬಂದಿದ್ದರು ಆ ಸಮಯದಲ್ಲಿ ನೀವು ಹಾಜರು ಇದ್ದಿರಿ ಎಂದರೆ ಸಾಕ್ಷಿ ಹೊಸಪೇಟೆ ಸರ್ಕಲ್ ಹತ್ತಿರಬಂದಿದ್ದರು ಆದರೆ ಸಹಿಯನ್ನು ಠಾಣೆಯಲ್ಲಿ ಹಾಕಿರುತ್ತೇನೆ ಎಂದು ನುಡಿಯುತ್ತಾರೆ. ಸದರಿ ಪೋಟೋವನ್ನು ನಿಪಿ-3 ಎಂದು ಗುರುತಿಸಲಾಯಿತು. ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಗೊತ್ತಿದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :- ಶ್ರೀ. ವಿ ಎಲ್ ಎನ್** ವಕೀಲರಿಂದ **ಆರೋಪಿ** ಪರವಾಗಿ :-

ಈ ಪ್ರಕರಣದ ಬಗ್ಗೆ ನಿಮಗೆ ಯಾವುದೇ ಮಾಹಿತಿ ಇರುವುದಿಲ್ಲ ಸುಳ್ಳು ದಾಖಲೆಯನ್ನು ಸೃಷ್ಟಿಸುವ ಸವಲುವಾಗಿ ಪೋಲಿಸರೊಂದಿಗೆ ಶಾಮೀಲಾಗಿ ಠಾಣೆಯಲ್ಲಿ ಸಹಿ ಮಾಡಿ ಆರೋಪಿಗೆ ತೊಂದರೆ ಕೊಡುವ ಸಲುವಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲ ಎಂದು ನುಡಿಯುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್?ಸಿ. ಮಾಗಡಿ.**

**ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್‌ಸಿ.**
**ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 1966 /2023**

**ಚಾಸಾ ಃ- 01 / ಪ್ರಾಸಾ ಃ- 01**

| | |
|---|---|
| ಹೆಸರು | ನಂಜುಂಡಯ್ಯ |
| ತಂದೆ ಹೆಸರು | ನಾರಾಣಯಪ್ಪ |
| ವಯಸ್ಸು | 30 |
| ಉದ್ಯೋಗ | ವ್ಯವಸಾಯ |
| ವಿಳಾಸ | ಅಜ್ಜನಹಳ್ಳಿ , ಮಾಗಡಿ ತಾಲ್ಲೂಕು |

**ದಿನಾಂಕಃ 23-09-2023 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ಆರೋಪಿಗಳು ಚಾಸಾ-2 ರವರಿಗೆ ಹಲ್ಲೆ ಮಾಡಿರುವುದಿಲ್ಲ ಹಾಗೂ ನನಗೂ ಮತ್ತು ಚಾಸಾ-2 ರವರಿಗೂ ಅವಾಚ್ಯ ಶಬ್ದಗಳಿಂದ ಬೈಯ್ದಿರುವುದಿಲ್ಲ ಹಾಗೂ ಜೀವದ ಬೆದರಿಕೆಯನ್ನು ಹಾಕಿರುವುದಿಲ್ಲ ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿರುವುದಿಲ್ಲ.

ಈಗ ಸಾಕ್ಷಿಗೆ ದೂರನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ದೂರನ್ನು ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪಂಚನಾಮೆಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ದಿನಾಂಕ 14.02.2023 ರಂದು ನಮ್ಮ ದೊಡ್ಡಮ್ಮ ರವರಿಗೆ ಅದೇ ಗ್ರಾಮದ ನಾರಾಯಣಪ್ಪ ಎಂಬುವವರು ಜಮೀನಿನ ಜಾಗದ ವಿಚಾರದಲ್ಲಿ ಗಲಾಟೆ ಮಾಡಿ ಹೊಡೆದಿರುವ ವಿಚಾರದಲ್ಲಿ ಮಾಗಡಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದದರು ಎಂದರೆ ಸರಿಯಲ್ಲ. ನಾನು ನನ್ನ ದೊಡ್ಡಮ್ಮನನ್ನು ನೋಡಲು ನಮ್ಮ ಗ್ರಾಮದಿಂದ ನನ್ನ ಬೈಕ್ ನಲ್ಲಿ ಮಾಗಡಿ ಸರ್ಕಾರಿ ಆಸ್ಪತ್ರೆಗೆ ಬಂದು ನೋಡಿಕೊಂಡು ವಾಪಸ್ಸು ಹೊರಡಲು ನನ್ನ ಬೈಕ್ ನಲ್ಲಿ ನಮ್ಮ ತಾತನಾದ ಮಾಳಗಪ್ಪರವರನ್ನು ಕೂರಿಸಿಕೊಂಡು ರಾತ್ರಿ 9.15 ಗಂಟೆ ಸಮಯದಲ್ಲಿ ಮಾಗಡಿ ಬೆಂಗಳೂರು ರಸ್ತೆ ಹೊಸಪೇಟೆ ಗೇಟ್ ನ ಹಿಂದೆ ಇರುವ ಇಂಡಿಯನ್ ಪೆಟ್ರೋಲ್ ಬಂಕ್ ಹತ್ತಿರ ಹೋಗುವಾಗ ನನ್ನ ಹಿಂದಿನಿಂದ ಒಂದು ಶಿಪ್ಟ್ ಕಾರು ನನ್ನ ಬೈಕ್ ಗೆ ಅಡ್ಡಲಾಗಿ ಕಾರನ್ನು ನಿಲ್ಲಿಸಿದರು ಎಂದರೆ ಸರಿಯಲ್ಲ. ಕಾರಿನಿಂದ ಆರೋಪಿನಯು ಇಳಿದು ನನ್ನ ಹೆಲ್ಮೆಟ್ ಅನ್ನು ಕಿತ್ತುಕೊಂಡು ಬೈಕ್ ನ ಹಿಂದೆ ಕುಳಿತಿದ್ದ ಮಾಳಗಪ್ಪನಿಗೆ ಹೆಲ್ಮೆಟ್ ನಿಂದ ಹೊಡೆದನು ಎಂದರೆ ಸರಿಯಲ್ಲ. ಆ ಗ ನನ್ನ ಬೈಕ್ ಕೆಳಗೆ ಬಿದ್ದಿದುದ ಸದರಿ ನರಸೇಗೌಡ ಹಾಗೂ ಇನ್ನು ಇತರರು ಕಾರಿನಿಂದ ಕೆಳಗೆ ಇಳಿದು ನನ್ನನುನ ಹಿಡಿದುಕೊಂಡು ಕಾರಿನೊಳಗೆ ಹಾಕಿಕೊಂಡು ಕಲ್ಯಾ ಗೇಟಿ ಕಡೆಗೆ ಹೊರಟರು ಎಂದರೆ ಸರಿಯಲ್ಲ. ಆಗ ನಾನು ಕೂಗಿಕೊಂಡಾಗ ನನ್ನ ಮೊಬೈಲ್ ಅನುನ ಜೇಬಿನಿಂದ ತೆಗೆದುಕೊಂಡು ನನಗೆ ಬಾಯಿಗೆ ಬಂದಂತೆ ಬೈಯ್ದು ಕೈಗಳಿಂದ ಹೊಡೆದರು ಎಂದರೆ ಸರಿಯಲ್ಲ. ನಾನು ಜೋರಾಗಿ ಅಳುತ್ತಿದ್ದಾಗ ಸೋಮೇಶ್ವರ ದೇವಸ್ಥಾನದ ಹತ್ತಿರ ಕಾರನ್ನು ನಿಲ್ಲಿಸಿ ನಿನಗೆ ಇವತ್ತಲ್ಲ ನಾಳೆ ಕೊಲೆ ಮಾಡದೆ ಬಿಡುವುದಿಲ್ಲವೆಂದು ಬೆದರಿಕೆ ಹಾಕಿ ನನ್ನನ್ನು ಕಾರಿನಿಂದ ಕೆಳಗೆ ಇಳಿಸಿ ಹೊರಟು ಹೋದರು ಎಂದರೆ ಸರಿಯಲ್ಲ. ನಾನು ಯಾವುದೋ ವಾಹನದಲ್ಲಿ ಸರ್ಕಲ್ ಗೆ

ಬಂದು ನನ್ನ ದ್ವಿಚಕ್ರ ವಾಹನವನ್ನು ನೋಡಿದಾಗ ಅಲ್ಲಿಯೇ ಬಿದ್ದಿದ್ದು ಆಗ ನಾನು ಅದನ್ನು ತೆಗೆದುಕೊಂಡು ಹೊಸಪೇಟೆ ಸರ್ಕಲ್ ನಲ್ಲಿ ಕುಳಿತಿದ್ದ ನನ್ನ ತಾತ ಮಾಳಗಪ್ಪ ನನ್ನು ನೋಡಿ ಅವರನ್ನು ಗವಿನಾಗಮಂಗಲಕ್ಕೆ ಬಿಟ್ಟು ನಾನು ನಮ್ಮ ಊರಿಗೆ ಹೋಗಿರುತ್ತೇನೆ ಎಂದರೆ ಸರಿಯಲ್ಲ. ದಿನಾಂಕ 17.02.2023 ರಂದು ಪೋಲಿಸರು ಘಟನಾ ಸ್ಥಳಕ್ಕೆ ಬಂದು ನನ್ನ ಹಾಗೂ ಚಾಸಾ-3 ಮತ್ತು 4 ರವರ ಸಮಕ್ಷಮ ಸಂಜೆ 4.00 ರಿಂದ 4.30 ಗಂಟೆವರೆಗೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ದಿನಾಂಕ 18.02.2023 ರಂದು ನಾನು ಪೋಲಿಸರಿಗೆ ಮರು ಹೇಳಿಕೆಯನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಗೊತ್ತಿದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಃ- ಶ್ರೀ. ವಿ ಎಸ್ ಎಎನ್** ವಕೀಲರಿಂದ **ಆರೋಪಿಗಳ** ಪರವಾಗಿ ಃ-

ಪಾಟೀಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್?ಸಿ. ಮಾಗಡಿ.**